ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	991
ಸದಸ್ಯರ ಹೆಸರು	:	ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	21.12.2021
ಉತ್ತರಿಸಬೇಕಾದ ಸಚಿವರು	:	ನಗರಾಭಿವೃದ್ಧಿ ಸಚಿವರು.

****

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದ ಪಟ್ಟಣ ಪಂಚಾಯಿತಿಗಳಲ್ಲಿ ಭೂ ಪರಿವರ್ತಿತ ಅನಧಿಕೃತವಾಗಿ ವಿಭಜನೆಯಾಗಿರುವ (Split Converstion) ಜಮೀನುಗಳಿಗೆ ಖಾತೆ ನಿರಾಕರಿಸಲಾಗಿದ್ದ ಪರಭಾರೆ, ಕಟ್ಟಡ ಪರವಾನಗಿ ನೀಡಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುತ್ತದೆ.
ಆ.	ದಿನಾಂಕ :08-12-1976ರ ಪೂರ್ವದಲ್ಲಿ ಪರಿವರ್ತಿತ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ಅವಕಾಶವಿದ್ದು, ಇದನ್ನು ಮುಂದುವರೆಸಿ ಕನಿಷ್ಠ 2015 ರವರೆಗಿನ ಪರಿವರ್ತಿತ ನಿವೇಶನಗಳಿಗೆ ಪರವಾನಗಿ ನೀಡಲು ಕ್ರಮವಹಿಸುವುದೇ?	ಸ್ಥಳೀಯ ಯೋಜನಾ ಪ್ರದೇಶದ ಘೋಷಣೆಯ ಪೂರ್ವದಲ್ಲಿ ಭೂ ಪರಿವರ್ತನೆಗೊಂಡ ಜಮೀನುಗಳಿಗೆ ಸಕ್ಷಮ ಪ್ರಾಧಿಕಾರದಿಂದ ನಿಯಮಾನುಸಾರ ಅನುಮೋದನೆ ಪಡೆದಿರುವ ವಿನ್ಯಾಸಗಳಲ್ಲಿನ ನಿವೇಶನಗಳಿಗೆ ಕಟ್ಟಡ ಪರವಾನಿಗೆ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಲು ಯಾವುದೇ ನಿರ್ಬಂಧವಿರುವುದಿಲ್ಲ. ಆದರೆ, ದಿನಾಂಕ 08.12.1976ರಲ್ಲಿ ಕರ್ನಾಟಕ ಪುರ ಸಭೆಗಳ ಕಾಯ್ದೆ 1964ರಲ್ಲಿ ಕಲಂ 387 ಸೇಪರ್ಡೆಗೊಳಿಸಲಾಗಿದ್ದು, ಅದರಂತೆ ನಗರ ಸ್ಥಳೀಯ ಸಂಸ್ಥೆಗಳು ಯೋಜನಾ ಪ್ರಾಧಿಕಾರಗಳನ್ನು ರಚಿಸದೇ ಇರುವ ಪ್ರದೇಶಗಳಲ್ಲಿ ನಗರ ಯೋಜನಾ ವಿಷಯಗಳಿಗೆ ಸಂಬಂಧಿಸಿದಂತೆ ಸಮೀಪದ ಯೋಜನಾ ಪ್ರಾಧಿಕಾರದೊಂದಿಗೆ ಸಮಾಲೋಚಿಸಬೇಕಿರುತ್ತದೆ. ದಿನಾಂಕ 08.12.1976ರ ನಂತರ ವಿನ್ಯಾಸ ಕ್ಕೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಿಗೆ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಲು ಅವಕಾಶವಿರುವುದಿಲ್ಲ. ಅದರಂತೆ ದಿ: 04.05.2017ರ ಸುತ್ತೋಲೆಯಲ್ಲಿ ತಾಂತ್ರಿಕ ಅಭಿಪ್ರಾಯ ನೀಡುವ ಕುರಿತು ಅಗತ್ಯ ನಿರ್ದೇಶನ ನೀಡಲಾಗಿರುತ್ತದೆ.

		ದಿನಾಂಕ:08.12.1976ರಲ್ಲಿ ಕರ್ನಾಟಕ ಪುರಸಭೆಗಳ ಕಾಯ್ದೆ 1964ರಲ್ಲಿ ಕಲಂ 387 ಸೇರ್ಪಡೆಗೊಳಿಸಲಾಗಿದ್ದು, ಅದರಂತೆ ನಗರ ಸ್ಥಳೀಯ ಸಂಸ್ಥೆಗಳು ಯೋಜನಾ ಪ್ರಾಧಿಕಾರಗಳನ್ನು ರಚಿಸದೇ ಇರುವ ಪ್ರದೇಶಗಳಲ್ಲಿ ನಗರ ಯೋಜನಾ ವಿಷಯಗಳಿಗೆ ಸಂಬಂಧಿಸಿದಂತೆ ಸಮೀಪದ ಯೋಜನಾ ಪ್ರಾಧಿಕಾರದೊಂದಿಗೆ ಸಮಾಲೋಚಿಸಬೇಕಾಗಿರುವುದರಿಂದ, ದಿನಾಂಕ:08.12.1976ರ ಪೂರ್ವದಲ್ಲಿ ಭೂ ಪರಿವರ್ತಿತ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ದಿನಾಂಕ:19.10.2013ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ದಿನಾಂಕ:28.05.2014 ರಲ್ಲಿ Karnataka Town and Country Planning (Regularisation of unauthorised Development or Constructions) Rules, 2014 ಅನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA (C) No(s).956-957/2017 ರಲ್ಲಿ ದಿ:13.07.2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ, ಯಾವುದೇ ಅನಧಿಕೃತ ಬಡಾವಣೆಗಳನ್ನು ಅಧಿಕೃತವಾಗಿಸಲು ಪ್ರಸ್ತುತ ಅವಕಾಶವಿರುವುದಿಲ್ಲ. ಇತರೆ ನಗರ / ಪಟ್ಟಣಗಳಲ್ಲಿ ಈ ವಿಷಯದ ಬಗ್ಗೆ ಸಮಾಲೋಚಿಸಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿ ರಚಿಸಲಾಗಿರುತ್ತದೆ.

ಸಂಖ್ಯೆ: ನಅಇ 479 ಮೈಅಪ್ರಾ 2021(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು